ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ನಂ. 09, 2ನೇ ಮಹಡಿ, 1ನೇ ಮುಖ್ಯರಸ್ತೆ, (ಹೊರವರ್ತುಲ ರಸ್ತೆ),ಕೆಂಗೇರಿ ಉಪನಗರ,ಬೆಂಗಳೂರು-60.

ಸಂಖ್ಯೆ : ಸ.ಇಂ/ವಾ-130/ವಾರ್ಡ್‌ಸಭೆ/2020-21 ದಿನಾಂಕ : 02/01/2021

## ವಾರ್ಡ್-130ರ ವಾರ್ಡ್ ಸಭೆಯ ನಡವಳಿ.

**ದಿನಾಂಕ: 02/01/2021 ರಂದು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿಯ ನಡುವಳಿಗಳು**

**ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ಸದಸ್ಯರುಗಳು:**

| ಕ್ರ ಸಂ | ಸದಸ್ಯರ ಹೆಸರು/ಪದನಾಮ | ಪದನಾಮ |
|---|---|---|
| 1 | ಶ್ರೀ ಮುತ್ತುರಾಜ್ | ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು ನೋಡಲ್ ಅಧಿಕಾರಿ |
| 2 | ಶ್ರೀ ಶ್ರೀಧರ್.ಸಿ | ಸಹಾಯಕ ಇಂಜಿನಿಯರ್ ವಾರ್ಡ್-130 ಹಾಗೂ ಸದಸ್ಯ ಕಾರ್ಯದರ್ಶಿ |
| 3 | ಶ್ರೀಮತಿ ಪೂರ್ಣಿಮ ಜಿ.ಬಿ | ಸಹಾಯಕ ಕಾರ್ಯಪಾಲಕ ಇಣಜಿನಿಯರ್, ಘನತ್ಯಾಜ್ಯ ನಿರ್ವಹಣೆ, ಕೆಂಗೇರಿ(ವಿ) |
| 4 | ಶ್ರೀಮತಿ ರೂಪ.ಎಂ | ಸಹಾಯಕ ಅಭಿಯಂತರರು(ವಿದ್ಯುತ್) ರಾಜರಾಜೇಶ್ವರಿನಗರ ವಲಯ |
| 5 | ಡಾ॥ ಅನುಪಮ | ಪ್ರಾಥಮಿಕ ಆರೋಗ್ಯ ಕೇಂದ್ರ, ಉಲ್ಲಾಳ |
| 6 | ವಾರ್ಡ್ ಕಮಿಟಿ ಸದಸ್ಯರುಗಳು | ವಾರ್ಡ್-130 |

ವಾರ್ಡ್ ನಂ.130 ಉಲ್ಲಾಳ ವಾರ್ಡ್‌ನ ಸಹಾಯಕ ಇಂಜಿನಿಯರ್ ಹಾಗೂ ಸದಸ್ಯ ಕಾರ್ಯದರ್ಶಿಯವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರನ್ನು ಸ್ವಾಗತಿಸಿದರು.

ನೋಡಲ್ ಅಧಿಕಾರಿಗಳು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ವಾರ್ಡಿನ ವ್ಯಾಪ್ತಿಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸಭೆಯಲ್ಲಿ ಹಾಜರಿದ್ದ ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರುಗಳಿಂದ ಮಾಹಿತಿ ಪಡೆದರು.

ಸಭೆಯಲ್ಲಿ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿದರು.

1) ವಾರ್ಡ್ ವ್ಯಾಪ್ತಿಯಲ್ಲಿ ಕಾವೇರಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಲಾಯಿತು (ಕ್ರಮ:- ಸಹಾಯಕ ಇಂಜಿನಿಯರ್, ಬಿ.ಡಬ್ಲೂ.ಎಸ್.ಎಸ್.ಬಿ).

2) ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸುತ್ತಿರುವುದಿಲ್ಲ ಮತ್ತು ಸಭೆಗೆ ಯಾರೂ ಹಾಜರಾಗಿರುವುಗಿಲ್ಲ ಎಂಬ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಇನ್ನು ಮುಂದೆ ಈ ತರಹ ಮರುಕಳಿಸದಂತೆ ಕ್ರಮ ವಹಿಸಲು ಸೂಚಿಸಲಾಯಿತು. (ಕ್ರಮ:- ಸಹಾಯಕ ಇಂಜಿನಿಯರ್, ವಿದ್ಯುತ್ ವಿಭಾಗ).

3) ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ರಸ್ತೆಗಳನ್ನು ಸ್ವಚ್ಛವಾಗಿಡಲು ಕ್ರಮ ವಹಿಸುವಂತೆ ಹಾಗೂ ದಿನನಿತ್ಯ ರಸ್ತೆ ಕಸ ಗುಡಿಸಲು ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ತಿಳಿಸಿದರು. ಕಸ ವಿಲೇವಾರಿಯಲ್ಲಿ ಗಾಂಧಿನಗರ, ಶಿರ್ಕೆ ವಲಗೇರಹಳ್ಳಿ ಸುತ್ತಮುತ್ತ ಸಮರ್ಪಕವಾಗಿ ನಿರ್ವಹಿಸದೇ ಇದ್ದು, ಸಮರ್ಪಕವಾಗಿ ಕಸ ವಿಲೇವಾರಿಗೆ ಕ್ರಮ ವಹಿಸಲು ಕದರಪ್ಪ ಸದಸ್ಯರು ತಿಳಿಸಿದರು. ಒಣಕಸ ಮತ್ತು ಹಸಿ ಕಸವನ್ನು ಬೇರ್ಪಡಿಸಿ ಸಂಗ್ರಹಿಸಲು ಸಾರ್ವಜನಿಕರಲ್ಲಿ ತಿಳುವಳಿಕೆ ಮೂಡಿಸಲು ಅಗತ್ಯ ಕ್ರಮ ವಹಿಸುವುದು. ವಾರ್ಡ್ ವ್ಯಾಪ್ತಿಯಲ್ಲಿ ತೀವ್ರವಾಗಿ ಶುಚಿಗೊಳಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಉಪಾಧ್ಯಾಯ ಬಡಾವಣೆಯ ನಿವಾಸಿಗಳು ತಿಳಿಸಿದರು (ಕ್ರಮ:- ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಘ.ತ್ಯಾ.ನಿ).

4) ವಾರ್ಡ್ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ಗುಣಮಟ್ಟ ಕಾಯ್ದುಕೊಂಡು ಕೆಲಸ ನಿರ್ವಹಿಸಲು ಸೂಚಿಸುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ರಸ್ತೆಗಳಲ್ಲಿ ಗುಂಡಿ ಮುಚ್ಚಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು. ವಾರ್ಡ್ ವ್ಯಾಪ್ತಿಯಲ್ಲಿ ಹಾಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ವಿವರ ಈ ಹಿಂದೆ ಅಭಿವೃದ್ಧಿಪಡಿಸಿರುವ ಬಡಾವಣೆಗಳಲ್ಲಿ ನಿರ್ವಹಿಸಿರುವ ಕಾಮಗಾರಿಗಳ ವಿವರಗಳನ್ನು ಸಭೆಗೆ ತಿಳಿಸಿದರು.

ಮುಂದುವರೆದು ವಾರ್ಡ್ ವ್ಯಾಪ್ತಿಯಲ್ಲಿ ವಿವಿಧ ಬಡಾವಣೆಗಳಲ್ಲಿ ಯಾವುದಾದರೂ ಕಾಮಗಾರಿ ಅವಶ್ಯಕತೆ ಇದ್ದಲ್ಲಿ ತಿಳಿಸುವಂತೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಲಾಯಿತು. (ಕ್ರಮ:- ವಾರ್ಡ್ ಇಂಜಿನಿಯರ್).

5) ಉಲ್ಲಾಳ ವಾರ್ಡ್ ನಂ.130ರ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಅವಶ್ಯವಿರುವ ಬಡಾವಣೆಗಳಲ್ಲಿನ ರಸ್ತೆಯ ವಿವರಗಳನ್ನು ಸದಸ್ಯಕಾರ್ಯದರ್ಶಿಯವರಿಗೆ ಒದಗಿಸುವಂತೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು. ಸದರಿ ವಿವರಗಳನ್ನು ಪರಿಷ್ಕರಿಸಿ

ಅಗತ್ಯ ಕ್ರಮ ವಹಿಸಲು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯವರ ಜೊತೆ ಪತ್ರ ವ್ಯವಹಾರ ಮಾಡಲು ಸದಸ್ಯ ಕಾರ್ಯದರ್ಶಿಯವರಿಗೆ ತಿಳಿಸಲಾಯಿತು. ಬೇಕರಿ ಹತ್ತಿರ ಹೊಸದಾಗಿ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಪೈಪ್‌ಲೈನ್ ಹಾಕಬೇಕಿದ್ದಲ್ಲಿ ಹಾಕಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು (ಕ್ರಮ:- ವಾರ್ಡ್ ಇಂಜಿನಿಯರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ).

6) ನೋಡಲ್ ಅಧಿಕಾರಿಗಳು ಸಭೆಯಲ್ಲಿದ್ದ ಎಲ್ಲಾ ಸದಸ್ಯರುಗಳನ್ನು ಉದ್ದೇಶಿಸಿ ತಿಳಿಸುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಶೌಚಾಲಯಗಳ ಅವಶ್ಯಕತೆ ಮತ್ತು ಸ್ಥಳ ಹಾಗೂ ಪಾದಾಚಾರಿ ಮಾರ್ಗಗಳ ಅಭಿವೃದ್ಧಿ, ಹೊಸ ಪಾದಾಚಾರಿ ಮಾರ್ಗಗಳ ಅವಶ್ಯಕತೆ ಬಗ್ಗೆ ವಿವರಗಳನ್ನು ಸಭೆಗೆ ಒದಗಿಸುವಂತೆ ತಿಳಿಸಿದರು. ವಿವರಗಳನ್ನು ಪಡೆದು ಕ್ರೂಢೀಕರಿಸಲು ಸದಸ್ಯ ಕಾರ್ಯದರ್ಶಿಗಳಿಗೆ ಸೂಚಿಸಿದರು (ಕ್ರಮ:- ಸಹಾಯಕ ಇಂಜಿನಿಯರ್).

7) ವಾರ್ಡ್ ವ್ಯಾಪ್ತಿಯಲ್ಲಿ ಅರ್ಹ ಫಲಾನುಭವಿಗಳಿಗೆ ನಿವೇಶನ ಹಕ್ಕುಪತ್ರಗಳನ್ನು ವಿತರಿಸಲು ಅಗತ್ಯ ಕ್ರಮವಹಿಸುವಂತೆ ತಿಳಿಸಲಾಯಿತು (ಕ್ರಮ:- ಕಂದಾಯ ಇಲಾಖೆ).

ಅಂತಿಮವಾಗಿ ವಾರ್ಡ್‌ನ ಎಲ್ಲಾ ವಾರ್ಡ್ ಕಮಿಟಿಯ ಸದಸ್ಯರಗಳ ಮತ್ತು ವಿವಿಧ ಸಂಘ ಸಂಸ್ಥೆಗಳು ಜೊತೆಗೂಡಿ ಸಮನ್ವಯ ಸಾಧಿಸಿ ಕುಂದು ಕೊರತೆಗಳನ್ನು ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಎಲ್ಲಾ ಅಧಿಕಾರಿ ವರ್ಗದವರಿಗೆ ಸೂಚಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಮುತ್ತುರಾಜ್)
ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು
ಹಾಗೂ ನೋಡಲ್ ಅಧಿಕಾರಿ,
ವಾರ್ಡ್‌ನಂ.130, ಉಲ್ಲಾಳ
ಕೆಂಗೇರಿ ಉಪ ವಿಭಾಗ
ಬಿ.ಬಿ.ಎಂ.ಪಿ.,ಬೆಂಗಳೂರು.

**ಪ್ರತಿಯನ್ನು:**

1) ವಲಯ ಆಯುಕ್ತರು ಹಾಗೂ ವಿಶೇಷ ಆಯುಕ್ತರು(ಆಡಳಿತ) ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ತರಲು ಅವರ ಆಪ್ತ ಸಹಾಯಕರಿಗೆ ಸಲ್ಲಿಸಿದೆ.
2) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂ.ಉ.ವಿ/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ(ಯಶವಂತಪುರ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಎಲ್ಲಾ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
7) ಕಛೇರಿ ಪ್ರತಿ